ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಮಾನ್ಯ ವಿಧಾನ ಪರಿಷತ್ತಿನ ಸದಸ್ಯರ ಹೆಸರು | : | ಶ್ರೀ ಟಿ.ಎನ್. ಜವರಾಯಿ ಗೌಡ.<br>(ವಿಧಾನ ಸಭೆಯಿಂದ ಚುನಾಯಿತರಾದವರು) |
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 329 |
| ಉತ್ತರಿಸಬೇಕಾದ ದಿನಾಂಕ | : | 10.12.2025 |
| ಉತ್ತರಿಸಬೇಕಾದ ಸಚಿವರು | : | ಮಾನ್ಯ ಕಂದಾಯ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಅಭಿವೃದ್ಧಿ ಯೋಜನೆಗಳಿಗೆ, ಕಾರ್ಯಕ್ರಮಗಳಿಗೆ ಭೂಮಿ ನೀಡುವ ಸ್ವಾಧೀನ ಪ್ರಕ್ರಿಯೆಯಲ್ಲಿ ಸಾಕಷ್ಟು ಗೊಂದಲವಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: | ಯಾವುದೇ ಗೊಂದಲಗಳು ಕಂಡುಬಂದಿರುವುದಿಲ್ಲ. |
| ಆ) | ಹಾಗಿದ್ದಲ್ಲಿ, ಭೂಸ್ವಾಧೀನಕ್ಕೆ ಸಂಬಂಧಪಟ್ಟಂತೆ ನಾನಾ ಇಲಾಖೆ, ಕಾಯಿದೆ, ನಿಯಮಗಳಡಿ ಪ್ರತ್ಯೇಕ ಪ್ರಕ್ರಿಯೆಗಳಿದ್ದು, ಗೊಂದಲದ ಜತೆಗೆ ಅತಿ ಹೆಚ್ಚು ವಿಳಂಬವಾಗುತ್ತಿರುವುದರಿಂದ ಸರ್ಕಾರಕ್ಕೆ ಆರ್ಥಿಕ ನಷ್ಟ ಉಂಟಾಗುತ್ತಿರುವುದು ಗಮನಕ್ಕೆ ಬಂದಿದೆಯೇ: | ಸಾರ್ವಜನಿಕ ಉದ್ದೇಶಕ್ಕಾಗಿ ಖಾಸಗಿ ಜಮೀನುಗಳನ್ನು ಸಂಬಂಧಪಟ್ಟ ಇಲಾಖೆಗಳು ವಿವಿಧ ಭೂಸ್ವಾಧೀನ ಕಾಯ್ದೆಗಳನ್ವಯ ಭೂಸ್ವಾಧೀನಪಡಿಸಿಕೊಳ್ಳುತ್ತಿದ್ದು, ಕೆಲವು ಪ್ರಕರಣಗಳಲ್ಲಿ/ ಯೋಜನೆಗಳಲ್ಲಿ ಭೂಕೋರಿಕೆ ಇಲಾಖೆ/ ಸಂಸ್ಥೆಗಳಿಂದ ಭೂಸ್ವಾಧೀನ ವೆಚ್ಚದ ಠೇವಣಿ ಇಡುವಲ್ಲಿ ಮಾತ್ರ ವಿಳಂಬವಾಗುತ್ತಿದ್ದು, ಕೆಲವು ಪ್ರಕರಣಗಳಲ್ಲಿ ವಿಳಂಬದ ದಿನಗಳಿಗೆ ಬಡ್ಡಿ ನೀಡಲಾಗುತ್ತಿರುವುದರಿಂದ ಆರ್ಥಿಕ ನಷ್ಟ ಉಂಟಾಗಿರುವುದು ಕಂಡು ಬಂದಿರುತ್ತದೆ. |
| ಇ) | ಬಂದಿದ್ದಲ್ಲಿ, ಸರ್ಕಾರ ಈ ಬಗ್ಗೆ ತೆಗೆದುಕೊಂಡಿರುವ ಕ್ರಮಗಳೇನು:<br>(ವಿವರ ನೀಡುವುದು) | ಸಾರ್ವಜನಿಕ ಉದ್ದೇಶದ ಸರ್ಕಾರಿ ಯೋಜನೆಗಳಿಗೆ ಅಗತ್ಯವಿರುವ ಖಾಸಗಿ ಜಮೀನನ್ನು ಭೂಸ್ವಾಧೀನಪಡಿಸಿ ಕೊಳ್ಳುವಲ್ಲಿ ಭೂಸ್ವಾಧೀನ ಕಾಯ್ದೆ- 2013 ರಡಿ ವಿವಿಧ ಹಂತಗಳಲ್ಲಿ ಕೈಗೊಳ್ಳಬೇಕಾದ ಕ್ರಮಗಳ ಕುರಿತು ಮಾರ್ಗಸೂಚಿಗಳ ಬಗ್ಗೆ ಈ ಬಗ್ಗೆ ಸಂಬಂಧಪಟ್ಟ ಭೂಕೋರಿಕೆ ಇಲಾಖೆಗಳಿಗೆ/ಸಕ್ಷಮ ಪ್ರಾಧಿಕಾರಿಗಳಿಗೆ ಸರ್ಕಾರದ ಸುತ್ತೋಲೆ ಸಂಖ್ಯೆ:ಕಂಇ 24 ಎಕ್ಯೂಹೆಚ್ 2024 ದಿನಾಂಕ: 19.09.2024 ರಲ್ಲಿ ಸೂಕ್ತ ನಿರ್ದೇಶನವನ್ನು ನೀಡಲಾಗಿರುತ್ತದೆ.<br>ಮುಂದುವರೆದು, ಕರ್ನಾಟಕ ರಾಜ್ಯದ ಎಲ್ಲಾ ಭೂಸ್ವಾಧೀನ ಪ್ರಕ್ರಿಯೆಗಳನ್ನು ಏಕರೂಪ ತಂತ್ರಾಂಶದ ಮೂಲಕ ವ್ಯವಹರಿಸಲು ಅನುವಾಗುವಂತೆ ಕಂದಾಯ ಇಲಾಖೆ, ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ, ನಗರಾಭಿವೃದ್ಧಿ ಇಲಾಖೆಯಲ್ಲಿನ ಭೂಸ್ವಾಧೀನ ಕಾಯ್ದೆಗಳನ್ನು ಇ-ಆಡಳಿತ ಹಾಗೂ ಕಂದಾಯ ಇಲಾಖೆ ವತಿಯಿಂದ ಜಂಟಿಯಾಗಿ ಏಕರೂಪಗೊಳಿಸಲು ಭೂಸ್ವಾಧೀನ ತಂತ್ರಾಂಶದ ಫೇಸ್-1 ಅನ್ನು ಜಾರಿಗೊಳಿಸಲಾಗಿರುತ್ತದೆ ಹಾಗೂ ಫೇಸ್-2 ಅನ್ನು ಜಾರಿಗೊಳಿಸಲು ಕ್ರಮವಹಿಸಲಾಗುತ್ತಿದೆ. |

| | | |
|---|---|---|
| ಈ) | ಭೂಸ್ವಾಧೀನ ಮತ್ತು ಪರಿಹಾರಕ್ಕೆ ಹಾಗೂ ಮಾಲೀಕರ ಹಕ್ಕುಗಳನ್ನು ರಕ್ಷಿಸುವ ಮತ್ತು ದಾವೆಗಳನ್ನು ತಗ್ಗಿಸುವ ಸಲುವಾಗಿ ಏಕರೂಪ ಕಾಯ್ದೆ ಪಾರದರ್ಶಕತೆ ಮತ್ತು ಏಕರೂಪ ಮಾನದಂಡಗಳನ್ನು ತರಲು ಸರ್ಕಾರಕ್ಕಿರುವ ತೊಂದರೆಗಳೇನು: ಈ ಬಗ್ಗೆ ಸರ್ಕಾರ ಸ್ಪಷ್ಟ ಕಾನೂನನ್ನು ರಚಿಸುವುದೇ? (ಮಾಹಿತಿ ನೀಡುವುದು) | ಕರ್ನಾಟಕ ರಾಜ್ಯದ ಎಲ್ಲಾ ಭೂಸ್ವಾಧೀನ ಪ್ರಕ್ರಿಯೆಗಳನ್ನು ಏಕರೂಪ ತಂತ್ರಾಂಶದ ಮೂಲಕ ವ್ಯವಹರಿಸಲು ಅನುವಾಗುವಂತೆ ಕಂದಾಯ ಇಲಾಖೆ, ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ, ನಗರಾಭಿವೃದ್ಧಿ ಇಲಾಖೆಯಲ್ಲಿನ ಭೂಸ್ವಾಧೀನ ಕಾಯ್ದೆಗಳನ್ನು ಇ-ಆಡಳಿತ ಹಾಗೂ ಕಂದಾಯ ಇಲಾಖೆ ವತಿಯಿಂದ ಜಂಟಿಯಾಗಿ ಏಕರೂಪಗೊಳಿಸಲು ಭೂಸ್ವಾಧೀನ ತಂತ್ರಾಂಶದ ಫೇಸ್-1 ಅನ್ನು ಜಾರಿಗೊಳಿಸಲಾಗಿರುತ್ತದೆ ಹಾಗೂ ಫೇಸ್-2 ಅನ್ನು ಜಾರಿಗೊಳಿಸಲು ಕ್ರಮವಹಿಸಲಾಗುತ್ತಿದೆ. |

ಸಂಖ್ಯೆ : ಕಂಇ 181 ಎಕ್ಯೂಬಿ 2025

ಕೃಷ್ಣ ಬೈರೇಗೌಡ
(ಕಂದಾಯ ಸಚಿವರು)